# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 670
2. ಸದಸ್ಯರ ಹೆಸರು : ಶ್ರೀ ಪಿ.ಆರ್. ರಮೇಶ್ (ನಾಮ ನಿರ್ದೇಶನ ಹೊಂದಿದವರು)
3. ಉತ್ತರಿಸುವ ದಿನಾಂಕ : 04-03-2021
4. ಉತ್ತರಿಸುವವರು : ಮುಖ್ಯಮಂತ್ರಿಗಳು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬಹುತೇಕ ಎಲ್ಲಾ ರಸ್ತೆಗಳು ಹಳ್ಳ / ತಗ್ಗು ಗುಂಡಿಗಳಿಂದ ಕೂಡಿದ್ದು, ದ್ವಿಚಕ್ರ / ಇತರೆ ವಾಹನ ಸವಾರರಿಗೆ ಸಂಚಾರ ಮಾಡಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಬಂದಿದ್ದಲ್ಲಿ ವಿವರ ನೀಡುವುದು) | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬಹುತೇಕ ಎಲ್ಲಾ ರಸ್ತೆಗಳು ಹಳ್ಳ / ತಗ್ಗು ಗುಂಡಿಗಳಿಂದ ಕೂಡಿದ್ದು, ದ್ವಿಚಕ್ರ ವಾಹನ ಸವಾರರಿಗೆ ಸಂಚಾರ ಮಾಡಲು ತೊಂದರೆಯಾಗುತ್ತಿರುವುದು ಗಮನಕ್ಕೆ ಬಂದಿದೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಒಟ್ಟು 470 ಆರ್ಟಿರಿಯಲ್ ಮತ್ತು ಸಬ್-ಆರ್ಟಿರಿಯಲ್ ರಸ್ತೆಗಳಿದ್ದು, ಇದರ ಉದ್ದವು 1344.84 ಕಿ.ಮೀ ಗಳಿದ್ದು, 85,229 ಸಂಖ್ಯೆಯ ವಾರ್ಡ್ ರಸ್ತೆಯಿದ್ದು, ಇವುಗಳ ಉದ್ದವು 12,348.5 ಕಿ.ಮೀಗಳಿರುತ್ತದೆ. |
| ಆ | ಈ ತಗ್ಗು ಗುಂಡಿಗಳಿಂದ ಹಲವು ವಾಹನ ಸವಾರರು ವಾಹನ ಚಾಲನೆ ಮಾಡುವಾಗ ನಿಯಂತ್ರಣ ಕಳೆದುಕೊಂಡು ಸಾವಿಗೆ ಈಡಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು; ಮತ್ತು ಸದರಿ ಎಷ್ಟು ಪ್ರಕರಣಗಳಲ್ಲಿ ಪರಿಹಾರ ಧನ ನೀಡಲಾಗಿದೆ; (ವಿವರ ನೀಡುವುದು) | ಈ ತಗ್ಗು ಗುಂಡಿಗಳಿಂದ ಹಲವು ವಾಹನ ಸವಾರರು ವಾಹನ ಚಾಲನೆ ಮಾಡುವಾಗ ನಿಯಂತ್ರಣ ಕಳೆದುಕೊಂಡು ಸಾವಿಗೆ ಈಡಾಗಿರುವ ಯಾವುದೇ ಪ್ರಕರಣಗಳು ದಾಖಲಾಗಿರುವುದಿಲ್ಲ. ಈ ಹಿನ್ನೆಲೆಯಲ್ಲಿ, ಯಾವುದೇ ಪರಿಹಾರ ಧನ ನೀಡುವ ಪ್ರಶ್ನೆ ಉದ್ಭವಿಸುವುದಿಲ್ಲ. |
| ಇ | ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ರಸ್ತೆಗಳಲ್ಲಿ ತಗ್ಗುಗುಂಡಿಗಳಿಲ್ಲದೆ ರಸ್ತೆಗಳನ್ನು ಸುಸ್ಥಿತಿಯಲ್ಲಿಡಲು ಪಾಲಿಕೆಯಿಂದ ತೆಗೆದುಕೊಂಡ ಕ್ರಮಗಳೇನು; ಆಯಾ ವಾರ್ಡ್‌ನ ಅಧಿಕಾರಿಗಳಿಗೆ ರಸ್ತೆಗಳ ಸುಸ್ಥಿತಿಯ ಹೊಣೆಗಾರಿಕೆ ನೀಡುವ ಕುರಿತು ಸರ್ಕಾರ ಚಿಂತನೆ ನಡೆಸಿದೆಯೇ? (ವಿವರ ನೀಡುವುದು) | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಉದ್ಭವಿಸಬಹುದಾದ ರಸ್ತೆ ಗುಂಡಿಗಳನ್ನು ಸಮರ್ಪಕವಾಗಿ ಮುಚ್ಚಿ ರಸ್ತೆಯನ್ನು ಸುಸ್ಥಿತಿಯಲ್ಲಿಡಲು ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ.<br>1. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದಲೇ "ಡಾಂಬರು ಮಿಶ್ರಣ ಘಟಕ"ವನ್ನು ಸ್ಥಾಪಿಸಲಾಗಿದ್ದು, ಸದರಿ ಘಟಕದಿಂದ ಪ್ರತಿದಿನ ಡಾಂಬರು ಮಿಶ್ರಣವನ್ನು ಪಡೆದು ರಸ್ತೆ ಗುಂಡಿಗಳನ್ನು ಮುಚ್ಚಲಾಗುತ್ತಿರುತ್ತದೆ. |

. . .2/-

| | | |
|---|---|---|
| | | 2. ಸದರಿ ರಸ್ತೆ ಗುಂಡಿಗಳನ್ನು "ರಸ್ತೆ ಗುಂಡಿ ಸೂಚಕ ಪಟ್ಟಿ (Pavement Condition Index)" ಕಾರ್ಯವನ್ನು ಕೈಗೆತ್ತಿಕೊಂಡು ರಸ್ತೆ ಗುಂಡಿಗಳನ್ನು ಗುರುತಿಸಿ ತ್ವರಿತವಾಗಿ ಮುಚ್ಚಲು ಕ್ರಮವಹಿಸಲಾಗುತ್ತಿರುತ್ತದೆ.<br>3. ರಸ್ತೆ ಅಗೆತ ಪರವಾನಗಿಯನ್ನು Online ಮಾಡಲಾಗಿದ್ದು, ರಸ್ತೆ ಗುಂಡಿಗಳನ್ನು / ರಸ್ತೆ ಕತ್ತರಿಸಿದ ಭಾಗಗಳನ್ನು ತ್ವರಿತವಾಗಿ ದುರಸ್ತಿಗೊಳಿಸಲು ರಸ್ತೆಗಳ ನಿರ್ವಹಣೆ ಬಗ್ಗೆ ಮಾರ್ಗಸೂಚಿಯನ್ನು ರಚಿಸಿದ್ದು, (Standard Operating Procedure) ಅದರ ಪ್ರಕಾರ ರಸ್ತೆ ಗುಂಡಿಗಳನ್ನು ಮುಚ್ಚಲು ಕ್ರಮಕೈಗೊಳ್ಳಲಾಗುತ್ತಿದೆ.<br>4. ಬಿಬಿಎಂಪಿಯ ಹೊರವಲಯ ಪ್ರದೇಶದ 110 ಹಳ್ಳಿಗಳಿಗೆ ನೀರು ಮತ್ತು ಒಳಚರಂಡಿಯನ್ನು ಒದಗಿಸುವ ಕಾಮಗಾರಿಯನ್ನು ಕೈಗೊಂಡಿರುವುದರಿಂದ ರಸ್ತೆ ಅಗೆತವಾಗಿದ್ದು, ಈ ರಸ್ತೆ ಅಗೆತದ ದುರಸ್ಥಿಯನ್ನು ಕೈಗೊಳ್ಳಲು ಅಗತ್ಯವಾದ ಅನುದಾನ ಬಿಡುಗಡೆ ಮಾಡಲು ಆಯುಕ್ತರು, ಬಿಬಿಎಂಪಿ ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು, ಸದರಿ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ.<br><br>ರಸ್ತೆ ಗುಂಡಿ ಮುಚ್ಚುವ ಕ್ರಮವನ್ನು ಆರ್ಟಿರಿಯಲ್ ಮತ್ತು ಸಬ್-ಆರ್ಟಿರಿಯಲ್ ರಸ್ತೆಗಳ ಜವಾಬ್ದಾರಿಯನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ರಸ್ತೆ ಮೂಲಭೂತ ಸೌಕರ್ಯ ಶಾಖೆಗೆ ನೀಡಲಾಗಿದ್ದು, ವಾರ್ಡ್ ಮಟ್ಟದ ರಸ್ತೆಗಳಲ್ಲಿ ಉಂಟಾಗುವ ರಸ್ತೆ ಗುಂಡಿಗಳನ್ನು ಮುಚ್ಚಲು ಆಯಾ ವಾರ್ಡ್ ಅಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ. |

**ಸಂಖ್ಯೆ: ನಅಇ 50 ಎಂಎಸ್‌ವೈ 2021 (ಇ)**

ಬಿ.ಎಸ್. ಯಡಿಯೂರಪ್ಪ

**(ಬಿ.ಎಸ್. ಯಡಿಯೂರಪ್ಪ)**

ಮುಖ್ಯಮಂತ್ರಿ